## ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
## KARNATAKA LEGISLATIVE ASSEMBLY, RESEARCH AND REFERENCE BRANCH

### ಪತ್ರಿಕಾ ತುಣುಕುಗಳು
### PAPER CLIPPINGS

6

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 13/2/21

# 2ಎ ಮೀಸಲಾತಿ ಹೋರಾಟದ ಬಗ್ಗೆ ಮಾತನಾಡಲ್ಲ: ಬಸವರಾಜ್ ಹೊರಟ್ಟಿ

ತುಮಕೂರು: ಮೀಸಲಾತಿಗಾಗಿ ಶ್ರೀಗಳು ನಡೆಸುತ್ತಿರುವ ಪಾದಯಾತ್ರೆ ಬಗ್ಗೆ ನಾನು ಮಾತನಾಡಲ್ಲ. ಶ್ರೀಗಳು ನಮ್ಮೆಲ್ಲರಿಗೂ ಮಾರ್ಗದರ್ಶನ ಮಾಡುವಂತಹವರು. ಅವರ ಹೋರಾಟಕ್ಕೆ ದೇವರು ಒಳ್ಳೆಯದು ಮಾಡಲಿ ಎಂದು ಬಸವರಾಜ್ ಹೊರಟ್ಟಿ ತಿಳಿಸಿದರು.



ವಿಧಾನ ಪರಿಷತ್ ಸಭಾಪತಿಯಾದ ಬಳಿಕ ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದು, ಬಳಿಕ ಮಾತನಾಡಿದ ಅವರು, ಯಾರ್ಯಾರಿಗೆ ಏನೇನು ಸೌಲಭ್ಯ ಕೊಡಬೇಕೆಂಬ ಬಗ್ಗೆ ಸರ್ಕಾರ ವಿಚಾರ ಮಾಡುತ್ತದೆ ಎಂದರು. ರಾಜಕೀಯ ಪಕ್ಷಗಳು, ರಾಜಕಾರಣಿಗಳು ಚುನಾವಣೆಗೆ ನಿಲ್ಲಬೇಕಾದರೆ ಜಾತಿ ಮುಂದಿಟ್ಟುಕೊಳ್ಳುತ್ತಾರೆ. ಇದು ಒಳ್ಳೆ ಪದ್ಧತಿಯಲ್ಲ ಎಂದರು. ದೇಶಕ್ಕೆ ಮಾದರಿಯಾಗುವ ಪರಿಷತ್ ಮಾಡಲು ನಾನು ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.